# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 231 (1691)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಎಂ. ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ಇಮಾಮ್‌ಗಳು/ಮೋಜಿನ್‌ಗಳಿಗೆ ಮಾಸಾಶನ ಇತ್ಯಾದಿ ಸೌಲಭ್ಯಗಳು

(ಅ) ರಾಜ್ಯ ವಕ್ಫ್ ಬೋರ್ಡ್‌ನಲ್ಲಿ ನೋಂದಾಯಿಸಲ್ಪಟ್ಟ ಮತ್ತು ಮಸೀದಿಗಳಲ್ಲಿ ಕೆಲಸ ಮಾಡುವ ಇಮಾಮ್‌ಗಳಿಗೆ, ಮೋಜಿನ್‌ಗಳಿಗೆ ಸರ್ಕಾರದಿಂದ ಮಾಸಾಶನ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಜಿಲ್ಲಾವಾರು ಮತ್ತು ಮಸೀದಿವಾರು ವಿವರ ನೀಡುವುದು;

(ಆ) ಮಾಸಾಶನದೊಂದಿಗೆ ಇತರೆ ಸೌಲಭ್ಯಗಳನ್ನು ಸರ್ಕಾರದಿಂದ ಹಾಗೂ ವಕ್ಫ್ ಬೋರ್ಡ್‌ನಿಂದ ನೀಡಲಾಗುತ್ತಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು;

(ಇ) ನಿವೇಶನ ರಹಿತ ಮತ್ತು ವಸತಿ ರಹಿತ ಬಡ ಇಮಾಮ್‌ಗಳಿಗೆ ಮತ್ತು ಮೋಜಿನ್‌ಗಳಿಗೆ ಸರ್ಕಾರ ಯಾವುದಾದರೂ ವಸತಿ ಯೋಜನೆ ಅಡಿಯಲ್ಲಿ ವಸತಿ ಕಲ್ಪಿಸಲು ಕಾರ್ಯಕ್ರಮ ರೂಪಿಸಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ವಕ್ಫ್ ಬೋರ್ಡ್‌ನಲ್ಲಿ ನೋಂದಾಯಿತ ಹಾಗೂ ನೋಂದಾಯಿತವಾಗದಿರುವ ಮಸೀದಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)